ಕರ್ನಾಟಕ ಸರ್ಕಾರ

**ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.**

E-mail:Commissioner.pue@gmail.com. Ph. No.23361857, 23361858* Fax-23361852

ಸಂಖ್ಯೆ: ಪಪೂಶಿಇ/ಆಡಳತ-1/GPL/ಸಿಆರ್-01/ಪ್ರಾ.ವರ್ಗ/01/2022-23 ದಿನಾಂಕ: 07 -11-2022

## ಜ್ಞಾಪನ

**ವಿಷಯ:-** 2022-23ನೇ ಶೈಕ್ಷಣಿಕ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಾಮಾನ್ಯ ವರ್ಗಾವಣೆಯನ್ನು ಕೌನ್ಸೆಲಿಂಗ್ ಮೂಲಕ ನಡೆಸುವ ಬಗ್ಗೆ.

**ಉಲ್ಲೇಖ:-**
1. ಈ ಕಚೇರಿ ಜ್ಞಾಪನ ಪತ್ರ ಸಂಖ್ಯೆ: ಪಪೂಶಿಇ/ಆವಿಎ/ಉ.ವರ್ಗ/01/ 2022-23 ದಿನಾಂಕ: 18-05-2022.
2. ಈ ಕಚೇರಿ ಸಮ ಸಂಖ್ಯೆ ಜ್ಞಾಪನ ದಿನಾಂಕ: 01-10-2022 ಮತ್ತು 14-10-2022.
3. ಈ ಕಚೇರಿ ಸಮಸಂಖ್ಯೆ ಜ್ಞಾಪನ ದಿನಾಂಕ: 13/09/2022 , 13/10/2022 ಮತ್ತು 27/10/2022.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರುಗಳ 2022-23ನೇ ಸಾಲಿನ ಸಾಮಾನ್ಯ ವರ್ಗಾವಣೆ ಕೌನ್ಸೆಲಿಂಗ್‌ಗಾಗಿ ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಉಲ್ಲೇಖ-01ರನ್ವಯ ಅವಕಾಶ ಕಲ್ಪಿಸಲಾಗಿದೆ. ಉಲ್ಲೇಖ-02ರನ್ವಯ ದಿನಾಂಕ: 01-10-2022ರಂದು ರಾಜ್ಯದ ಎಲ್ಲಾ ಜಿಲ್ಲೆಗಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರಾಂಶುಪಾಲರುಗಳ ಖಾಲಿ ಹುದ್ದೆಗಳ ಜಿಲ್ಲಾವಾರು ಮಾಹಿತಿಯನ್ನು ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಿ ದಿನಾಂಕ: 21-10-2022ರ ವರೆಗೆ ಜಿಲ್ಲಾ ಉಪ ನಿರ್ದೇಶಕರ ಮುಖೇನ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

ಅದರಂತೆ, ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ಪ್ರಾಂಶುಪಾಲರ ಪರಿಷ್ಕೃತ ಅಂತಿಮ ಪಟ್ಟಿಯನ್ನು ಹಾಗೂ ಪ್ರಾಂಶುಪಾಲರ ಖಾಲಿ ಹುದ್ದೆಗಳ ಅಂತಿಮ ಪಟ್ಟಿಯನ್ನು ದಿನಾಂಕ: 27-10-2022 ರಂದು ಪ್ರಕಟಿಸಲಾಗಿದೆ. ಆದರೆ ದಿನಾಂಕ: 02-11-2022ರಂದು ಕೌನ್ಸೆಲಿಂಗ್ ಸಮಯದಲ್ಲಿ ರಾಯಚೂರು ಜಿಲ್ಲಾ ಉಪ ನಿರ್ದೇಶಕರು, ಜಿಲ್ಲೆಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಖಾಲಿ ಹುದ್ದೆಗಳ ಬಗ್ಗೆ ನಿಗದಿತ ಅವಧಿಯಲ್ಲಿ ಪರಿಷ್ಕೃತ ಮಾಹಿತಿಯನ್ನು ಸಲ್ಲಿಸಿರುವುದಿಲ್ಲ. ಇದೇ ರೀತಿಯಾಗಿ ಕೆಲವೊಂದು ಜಿಲ್ಲೆಗಳ ಉಪ ನಿರ್ದೇಶಕರುಗಳು ಸಹ ಪ್ರಾಂಶುಪಾಲರ ಹುದ್ದೆಗಳು ನಿವೃತ್ತಿ/ನಿಧನದಿಂದ ಖಾಲಿ ಆಗಿರುವ ಅವುಗಳನ್ನು ಪರಿಷ್ಕರಣೆ ಮಾಡುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಜಿಲ್ಲಾ ಉಪ ನಿರ್ದೇಶಕರ ಮೂಲಕ ಈ ಕಛೇರಿಗೆ ಸ್ವೀಕೃತಗೊಂಡಿರುವ ಪ್ರಾಂಶುಪಾಲರುಗಳ ಖಾಲಿ ಹುದ್ದೆಗಳ ಮಾಹಿತಿಯನ್ನು ಇಂದೀಕರಿಸಿ, ಪರಿಷ್ಕರಿಸಿದ ಅಂತಿಮ ಪಟ್ಟಿಯನ್ನು ದಿನಾಂಕ: 07-11-2022 ರಂದು ಪ್ರಕಟಿಸಲಾಗಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಾಮಾನ್ಯ ವರ್ಗಾವಣೆ ಸ್ಥಳ ನಿಯುಕ್ತಿ ಕೌನ್ಸಿಲಿಂಗ್ ಅನ್ನು **ದಿನಾಂಕ: 10/11/2022ರ ಮಧ್ಯಾಹ್ನ 3:30 ಗಂಟೆಯಿಂದ** ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳ ಕಚೇರಿಯಲ್ಲಿ / ಜಿಲ್ಲಾ ಉಪನಿರ್ದೇಶಕರು ಸೂಚಿಸುವ ಸ್ಥಳಗಳಲ್ಲಿ ಝೂಮ್ ತಂತ್ರಾಂಶದ ಮುಖೇನ ಆನ್‌ಲೈನ್‌ನಲ್ಲಿ ಕೌನ್ಸೆಲಿಂಗ್ ನಡೆಸಲಾಗುತ್ತದೆ.

ಜಿಲ್ಲಾ ಉಪನಿರ್ದೇಶಕರುಗಳಿಗೆ ಹಾಗೂ ಸ್ಥಳನಿಯುಕ್ತಿ ಕೌನ್ಸೆಲಿಂಗ್‌ಗೆ ಹಾಜರಾಗುವ ಪ್ರಾಂಶುಪಾಲರುಗಳು ಕೌನ್ಸೆಲಿಂಗ್‌ಗೆ ಹಾಜರಾಗುವ ಮುನ್ನ ತೆಗೆದುಕೊಳ್ಳಬೇಕಾದ ಕ್ರಮದ ವಿವರ ಈ ಕೆಳಕಂಡಂತಿದೆ:

1. ಜಿಲ್ಲಾ ಉಪನಿರ್ದೇಶಕರು/ಕಚೇರಿ ಸಿಬ್ಬಂದಿ ವರ್ಗದವರು ವಿವಿಧ ಆದ್ಯತೆಯಡಿ ಸಲ್ಲಿಸಲಾದ ಪ್ರಾಂಶುಪಾಲರ ಮೂಲ ದಾಖಲೆಗಳನ್ನು ಪರಿಶೀಲಿಸತಕ್ಕದ್ದು.
2. ವಿವಿಧ ಆದ್ಯತೆ ಅಡಿ ವರ್ಗಾವಣೆ ಕೋರಿ ಅರ್ಜಿ ಸಲ್ಲಿಸಲಾದ ಪ್ರಾಂಶುಪಾಲರುಗಳನ್ನು ಕೌನ್ಸೆಲಿಂಗ್ ನಡೆಯುವ ಸಂದರ್ಭದಲ್ಲಿ ಅವರು ಪ್ರಾಂಶುಪಾಲರಾಗಿ ಹಾಜರಾದ ದಿನಾಂಕದ ಆಧಾರದ ಮೇಲೆ ಅವಕಾಶ ಕಲ್ಪಿಸತಕ್ಕದ್ದು.
3. ನಿಯಮಗಳನ್ವಯ ನಿಯಮ 17(V) ವರ್ಗಾವಣೆ ಸಮಾಲೋಚನೆಯಲ್ಲಿ ಹಾಜರಾಗುವ ಪ್ರಾಂಶುಪಾಲರು ಅವನು/ಅವಳು ಬೋಧನಾ ವಿಷಯವು ಮಂಜೂರಾಗಿರುವಂತಹ ಕಾಲೇಜಿನಲ್ಲಿ ಖಾಲಿ ಹುದ್ದೆಯನ್ನು ಆಯ್ಕೆ ಮಾಡಬಹುದು. ಅಂತಹ ಖಾಲಿ ಹುದ್ದೆ ಲಭ್ಯವಿಲ್ಲದಿದ್ದರೆ, ಅವನು/ಅವಳು ಯಾವುದೇ ಖಾಲಿ ಹುದ್ದೆಯನ್ನು ಆಯ್ಕೆ ಮಾಡಬಹುದು.
4. ವಿವಿಧ ಆದ್ಯತೆ ಅಡಿ ಸಲ್ಲಿಸಲಾದ ಪ್ರಾಂಶುಪಾಲರುಗಳು ಮೂಲ ದಾಖಲೆಗಳನ್ನು ಕೌನ್ಸೆಲಿಂಗ್ ಸಂದರ್ಭದಲ್ಲಿ ಅಧಿಕಾರಿಗಳಿಗೆ ಪರಿಶೀಲನೆಗೆ ಸಲ್ಲಿಸದಿದ್ದಲ್ಲಿ ಅಥವಾ ತಪ್ಪು ದಾಖಲೆಗಳನ್ನು ಸಲ್ಲಿಸಿದಲ್ಲಿ ಅಂತಹ ಪ್ರಾಂಶುಪಾಲರನ್ನು ಕೌನ್ಸೆಲಿಂಗ್‌ಗೆ ಅವಕಾಶ ನೀಡಲಾಗುವುದಿಲ್ಲ.
5. ಸ್ಥಳ ನಿಯುಕ್ತಿ ಕೌನ್ಸೆಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳುವ ಪ್ರಾಂಶುಪಾಲರುಗಳು ವರ್ಗಾವಣೆ ಬಯಸಿ ಸಲ್ಲಿಸಲಾದ ಆನ್-ಲೈನ್ ಅರ್ಜಿಯ ಪ್ರತಿಯನ್ನು ಉಪನಿರ್ದೇಶಕರ ಕಚೇರಿ ಅಧಿಕಾರಿ /ಸಿಬ್ಬಂದಿ ಪರಿಶೀಲಿಸಲು ಕೋರಿದಾಗ ಸಲ್ಲಿಸಲು ಸೂಚಿಸಿದೆ.
6. ಸ್ಥಳ ನಿಯುಕ್ತಿ ಕೌನ್ಸೆಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳುವ ಪ್ರಾಂಶುಪಾಲರುಗಳು ಇಲಾಖೆಯಿಂದ ನೀಡಲಾಗಿರುವ ಗುರುತಿನ ಚೀಟಿಯನ್ನು ಹಾಗೂ ಉಪ ನಿರ್ದೇಶಕರಿಂದ ಸೇವಾ ದೃಢೀಕರಣ ಪತ್ರವನ್ನು ಪಡೆದಿಟ್ಟುಕೊಳ್ಳತಕ್ಕದ್ದು.
7. ಸ್ಥಳ ನಿಯುಕ್ತಿ ಕೌನ್ಸೆಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳುವ ಪ್ರಾಂಶುಪಾಲರುಗಳಿಂದ ಆಯ್ಕೆ ಮಾಡಿಕೊಳ್ಳುವ ಕಾಲೇಜಿನ ವಿವರದ ಬಗ್ಗೆ ಉಪ ನಿರ್ದೇಶಕರ ಕಚೇರಿ ಸಿಬ್ಬಂದಿಗಳು ಒಪ್ಪಿಗೆ ಪತ್ರವನ್ನು ಕಡ್ಡಾಯವಾಗಿ ಪಡೆದುಕೊಳ್ಳುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ಇವರಿಗೆ:**

1. ಪದವಿ ಪೂರ್ವ ಶಿಕ್ಷಣ ಇಲಾಖೆ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ- ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಎಲ್ಲಾ ಪ್ರಾಂಶುಪಾಲರುಗಳಿಗೆ – ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
3. ಸಹಾಯಕ ನಿರ್ದೇಶಕರು – ಇ-ಆಡಳಿತ, ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ – ಅಂತರ್ಜಾಲದಲ್ಲಿ ಮಾಹಿತಿಗಳನ್ನು ಅಳವಡಿಸುವ ಬಗ್ಗೆ ಮತ್ತು ಅಗತ್ಯ ಕ್ರಮಕ್ಕೆ.
4. ಸಹಾಯಕ ನಿರ್ದೇಶಕರು – ಗಣಕ ಶಾಖೆ, ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ – ಕೌನ್ಸೆಲಿಂಗ್ ಸಿದ್ಧತೆ ಮತ್ತು ಸಹಕಾರಕ್ಕಾಗಿ.
5. ಕಚೇರಿ / ಹೆಚ್ಚುವರಿ ಪ್ರತಿ